ವಿಷಯ :- ಶಿರಾ ತಾಲ್ಲೂಕಿನಲ್ಲಿ ನಿವೇಶನ ರಹಿತರಿಗೆ ನಿವೇಶನ ನೀಡುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 864 (388)

ಶ್ರೀ ಟಿ. ಬಿ. ಜಯಚಂದ್ರ (ಕಳ್ಳಂಬೆಳ್ಳ) :- ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶಿರಾ ತಾಲ್ಲೂಕಿನಲ್ಲಿ ವಸತಿ ಮತ್ತು ನಿವೇಶನ ರಹಿತ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಯಾವುದೇ ಗ್ರಾಮದಲ್ಲಿ ಗ್ರಾಮಸಭೆಗಳನ್ನು ನಡೆಸದ ಸರ್ಕಾರದ ಎಲ್ಲಾ ನೀತಿ ನಿಯಮಗಳನ್ನು ಉಲ್ಲಂಘಿಸಿ ವಸತಿ ಮತ್ತು ನಿವೇಶನಗಳನ್ನು ನೀಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಈ ವಿಷಯವಾಗಿ ಸಾಕಷ್ಟು ದೂರುಗಳು ಬಂದಿರುವುದು ನಿಜವೇ?

ಇ) ಸರ್ಕಾರ ನೀತಿ ನಿಯಮಗಳನ್ನು ಉಲ್ಲಂಘಿಸಿರುವ ಅಧಿಕಾರಿಗಳ ವಿರುದ್ಧ ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್. ಡಿ. ರೇವಣ್ಣ (ವಸತಿ ಸಚಿವರು) :-

ಅ) 1995 ರ ಮೇ ತಿಂಗಳಲ್ಲಿ ತುಮಕೂರು ಜಿಲ್ಲೆಯಲ್ಲಿನ ಶಿರಾ ತಾಲ್ಲೂಕಿನಲ್ಲಿ ವಸತಿ ಮತ್ತು ನಿವೇಶನ ರಹಿತರ ಸಾರ್ವತ್ರಿಕ ಸರ್ವೇಕ್ಷಣೆ ಸಂದರ್ಭದಲ್ಲಿ ಗುರುತಿಸಲಾದ ಫಲಾನುಭವಿಗಳಿಗೆ ನಿವೇಶನ ಮತ್ತು ವಸತಿ ಸೌಕರ್ಯ ನೀಡಲಾಗಿದೆ.

ಆ) ಅನರ್ಹ ವ್ಯಕ್ತಿಗಳ ಹೆಸರು ಆಯ್ಕೆ ಪಟ್ಟಿಯಲ್ಲಿ ಇರುವುದರ ವಿರುದ್ಧ ದೂರುಗಳು ಬಂದಿದ್ದು, ಸದರೀ ದೂರುಗಳನ್ನು ಶಿರಾ ತಾಲ್ಲೂಕು ಪಂಚಾಯಿತಿ ಸಭೆಯಲ್ಲಿ ಮಂಡಿಸಿ ಇತ್ಯರ್ಥಪಡಿಸಿಕೊಳ್ಳಲಾಗಿದೆ. ಅನರ್ಹ ಫಲಾನುಭವಿಗಳು ಆಯ್ಕೆ ಪಟ್ಟಿಯಲ್ಲಿದ್ದರೆ ವಿಚಾರಣೆ ನಡೆಸಿ ಅಂತಹವರನ್ನು ಆಯ್ಕೆ ಪಟ್ಟಿಯಿಂದ ತೆಗೆದುಹಾಕಲು ತುಮಕೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಯವರಿಗೆ ಸರ್ಕಾರ ನಿರ್ದೇಶನ ನೀಡಿದೆ. ಫಲಾನುಭವಿಗಳ ಆಯ್ಕೆಯನ್ನು ಇನ್ನು ಮುಂದೆ ಸರ್ಕಾರದ ಆದೇಶದಂತೆ ಹಾಗೂ ಕರ್ನಾಟಕ ಪಂಚಾಯತ್ ರಾಜ್ ಕಾಯಿದೆ ಅನ್ವಯ ಇನ್ನು ಮುಂದೆ ಗ್ರಾಮ ಸಭೆಯಲ್ಲಿಯೇ ಆಯ್ಕೆ ಮಾಡಿಕೊಳ್ಳಲಾಗುವುದು.

ಇ) ಉದ್ಭವಿಸುವುದಿಲ್ಲ.

ವಿಷಯ :- ಹುಬ್ಬಳ್ಳಿ ನಗರದ ಕೊಳಚೆ ಪ್ರದೇಶದ ಅಭಿವೃದ್ಧಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 865 (1423)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) :- ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಬ್ಬಳ್ಳಿ ನಗರದ ವ್ಯಾಪ್ತಿಯಲ್ಲಿ ಬರತಕ್ಕ ಜೈಪ್ರಕಾಶ್ ಕೊಳಚೆ ಪ್ರದೇಶವನ್ನು ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿಯು ಕೊಳಚೆ ಪ್ರದೇಶ ಎಂದು ಘೋಷಿಸಿದೆಯೇ ; ಘೋಷಿಸಿದಲ್ಲಿ ಎಂದು ಘೋಷಿಸಲಾಯಿತು?

ಆ) ಈ ಕೊಳಚೆ ಪ್ರದೇಶದ ಅಭಿವೃದ್ಧಿಗೆ ಸರ್ಕಾರದವರು ಕೈಗೊಂಡು ಕ್ರಮಗಳೇನು?

ಶ್ರೀ ಹೆಚ್. ಡಿ. ರೇವಣ್ಣ (ವಸತಿ ಸಚಿವರು) :-

ಅ) ಹುಬ್ಬಳ್ಳಿ ನಗರದ ವ್ಯಾಪ್ತಿಯಲ್ಲಿ ಬರತಕ್ಕ ಜೈಪ್ರಕಾಶ್ ನಗರ ಕೊಳಚೆ ಪ್ರದೇಶವನ್ನು ಮಂಡಳಿಯ ಅಧಿನಿಯಮ 3(ಪ್ರಾರಂಭಿಕ)ರ ಪ್ರಕಾರ ಕೊಳಚೆ ಪ್ರದೇಶವೆಂದು ದಿನಾಂಕ 3-11-95 ರಂದು ಘೋಷಿಸಿದೆ.

ಆ) ಈ ಕೊಳಚೆ ಪ್ರದೇಶದ ಅಭಿವೃದ್ಧಿಗೆ ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿಯು 1996-97 ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಆರ್ಥಿಕ ಇತಿಮಿತಿ ಗನುಸಾರವಾಗಿ 50,000/- ರೂ. ಗಳನ್ನು ನಿಗದಿಪಡಿಸಲಾಗಿದೆ. ಅದರಂತೆ ಸದರಿ ಪ್ರದೇಶದಲ್ಲಿ ಸಿಮೆಂಟು ಚರಂಡಿ ನಿರ್ಮಿಸಲು ಅಂದಾಜುಪಟ್ಟಿಯನ್ನು 50,000/- ರೂ. ಗಳಿಗೆ ತಯಾರಿಸಲಾಗಿದ್ದು ಕೆಲಸವನ್ನು ಸಧ್ಯದಲ್ಲಿಯೇ ಕೈಗೊಳ್ಳಲಾಗುವುದು.

ವಿಷಯ :- ಪುಷ್ಪಕ್ ಬಸ್ಸುಗಳು ಕುರಿತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 866 (767)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) :- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಈಗ ಯಾವ ಯಾವ ನಗರಗಳಲ್ಲಿ ಎಷ್ಟೆಷ್ಟು ಪುಷ್ಪಕ್ ಬಸ್ ಗಳನ್ನು ಓಡಾಡಿಸಲಾಗುತ್ತಿದೆ ; ಈಗ ಒಟ್ಟು ಪುಷ್ಪಕ್ ಬಸ್‌ಗಳ ಸಂಖ್ಯೆ ಎಷ್ಟು ; ಈ ಬಸ್‌ಗಳಿಂದ ಕೆ.ಎಸ್.ಆರ್.ಟಿ.ಸಿ. ಸಂಸ್ಥೆಗೆ ಇಲ್ಲಿಯವರೆಗೆ ಆದ ಲಾಭವೆಷ್ಟು ;

ಆ) ಈ ಬಸ್ಸುಗಳ ಓಡಾಟದಿಂದ ಸಾರ್ವಜನಿಕರಿಗೆ ಹೆಚ್ಚಿನ ಆರ್ಥಿಕ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ; ಬಂದಲ್ಲಿ ಅದನ್ನು ಕಡಿಮೆ ಮಾಡಲು ಸರ್ಕಾರದವರು ಕೈಗೊಂಡ ಕ್ರಮಗಳೇನು?